ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

**ಸಂಖ್ಯೆ : ವಾಇ : ಜಂ ನಿ : ಸುಮಪ : 2021–22** **ದಿನಾಂಕ : 30–10–2021**

# ಮಾಧ್ಯಮ ಆಹ್ವಾನ
## MEDIA INVITATION

1. **ಕರ್ನಾಟಕ ವಿಧಾನ ಸಭೆ ಸಚಿವಾಲಯ ವತಿಯಿಂದ – "ರಾಷ್ಟ್ರೀಯ ಏಕತಾ ದಿವಸ" ಆಚರಣೆ**

ಪ್ರತಿಜ್ಞಾ ವಿಧಿ ಭೋದನೆ :

ವಿಶ್ವೇಶ್ವರ ಹೆಗಡೆ ಕಾಗೇರಿ,
ಸನ್ಮಾನ್ಯ ಸಭಾಧ್ಯಕ್ಷರು, ಕರ್ನಾಟಕ ವಿಧಾನಸಭೆ,

ದಿನಾಂಕ : 31–10–2021 ಭಾನುವಾರ, ಸಮಯ: ಬೆಳಿಗ್ಗೆ 11.00 ಗಂಟೆಗೆ

ಸ್ಥಳ : ಕೊಠಡಿ ಸಂ. 106, ಮೊದಲನೇ ಮಹಡಿ, ವಿಧಾನಸೌಧ, ಬೆಂಗಳೂರು.

2. **ಸಾರ್ವಜನಿಕ ಶಿಕ್ಷಣ ಇಲಾಖೆ ಮತ್ತು ಸಮಗ್ರ ಶಿಕ್ಷಣ ಕರ್ನಾಟಕ ವತಿಯಿಂದ**
   **66ನೇ ಕರ್ನಾಟಕ ರಾಜ್ಯೋತ್ಸವ ಸಮಾರಂಭ 2021**

ಧ್ವಜಾರೋಹಣ ಹಾಗೂ ರಾಜ್ಯೋತ್ಸವ ಸಂದೇಶ :

ಬಸವರಾಜ ಎಸ್ ಬೊಮ್ಮಾಯಿ
ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ವಿಶೇಷ ಆಹ್ವಾನಿತರು :
ಶ್ರೀಮತಿ ನಿರ್ಮಾಲಾ ಸೀತಾರಾಮನ್,
ಮಾನ್ಯ ಕೇಂದ್ರ ಹಣಕಾಸು ಮತ್ತು ಕಾರ್ಪ್ರೇರೇಟ್ ವ್ಯವಹಾರಗಳ ಸಚಿವರು, ಭಾರತ ಸರ್ಕಾರ

ಎಂ. ರಾಜೀವ್ ಚಂದ್ರಶೇಖರ್,
ಮಾನ್ಯ ಕೇಂದ್ರ ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ರಾಜ್ಯ ಸಚಿವರು, ಭಾರತ ಸರ್ಕಾರ

ಪ್ರಾಸ್ತಾವಿಕ ನುಡಿ :
ಬಿ.ಸಿ. ನಾಗೇಶ್,
ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು, ಕರ್ನಾಟಕ ಸರ್ಕಾರ

ಅಧ್ಯಕ್ಷತೆ :
ರಿಜ್ವಾನ್ ಅರ್ಷದ್,
ಮಾನ್ಯ ಶಾಸಕರು, ಶಿವಾಜಿನಗರ ವಿಧಾನಸಭಾ ಕ್ಷೇತ್ರ

ದಿನಾಂಕ : 01–11–2021 ಸೋಮವಾರ, ಸಮಯ: ಬೆಳಿಗ್ಗೆ 9.00 ಗಂಟೆಗೆ

ಸ್ಥಳ : ಶ್ರೀ ಕಂಠೀರವ ಕ್ರೀಡಾಂಗಣ, ಬೆಂಗಳೂರು.

### 3. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ – ರಾಜ್ಯೋತ್ಸವ ಪ್ರಸಸ್ತಿ ಪ್ರದಾನ ಸಮಾರಂಭ 2021

ಪ್ರಶಸ್ತಿ ಪ್ರದಾನ :

ಬಸವರಾಜ ಎಸ್ ಬೊಮ್ಮಾಯಿ
ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಉದ್ಘಾಟನೆ :
ವಿ. ಸುನೀಲ್ ಕುಮಾರ್,
ಮಾನ್ಯ ಇಂಧನ , ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು, ಕರ್ನಾಟಕ ಸರ್ಕಾರ

ಮುಖ್ಯ ಅತಿಥಿಗಳು:
ತೇಜಸ್ವಿ ಸೂರ್ಯ
ಮಾನ್ಯ ಸಂಸದರು, ಬೆಂಗಳ್ರರು ದಕ್ಷಿಣ ಲೋಕಸಭಾ ಕ್ಷೇತ್ರ

ಅಧ್ಯಕ್ಷತೆ :
ಉದಯ್ ಬಿ. ಗರುಡಾಚಾರ್,
ಮಾನ್ಯ ಶಾಸಕರು, ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ

ದಿನಾಂಕ : 01–11–2021 ಸೋಮವಾರ, ಸಮಯ: ಸಂಜೆ 6.00 ಗಂಟೆಗೆ

ಸ್ಥಳ : ರವೀಂದ್ರ ಕಲಾಕ್ಷೇತ್ರ, ಜೆ.ಸಿ. ರಸ್ತೆ, ಬೆಂಗಳೂರು.

ವಿಶೇಷ ಸೂಚನೆ: ಶ್ರೀಮತಿ ದೀಪಿಕಾ ಶ್ರೀಕಾಂತ್ ಮತ್ತು ತಂಡ, ಶಿವಮೊಗ್ಗ ಇವರಿಂದ ಸಚಿಜೆ 5.00 ಗಂಟೆಯಿಂದ 6.00 ಗಂಟೆಯವರೆಗೆ ಸಾಂಸ್ಕೃತಿಕ ಕಾರ್ಯಕ್ರಮ

# ಪತ್ರಿಕಾ ಪ್ರಕಟಣೆ

**PRESS RELEASE**

## ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮುಂದುವರೆಸಲು ಮನವಿ

ಬೆಂಗಳೂರು, ಅಕ್ಟೋಬರ್ 30 (ಕರ್ನಾಟಕ ವಾರ್ತೆ) :

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ "ಶುಲ್ಕ ಮರುಪಾವತಿ" ಕಾರ್ಯಕ್ರಮವನ್ನು 2014ರಿಂದ ಜಾರಿಗೊಳಿಸಿರುತ್ತದೆ. ಇದು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಈ ಯೋಜನೆಯಡಿಯಲ್ಲಿ ಹಿಂದುಳಿದ ವರ್ಗ ಹಾಗೂ ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ನೀಡಲು ಅವಕಾಶವಿರುತ್ತದೆ. ರಾಜ್ಯ ಸರ್ಕಾರವು ಇದರಲ್ಲಿ ಸಾಮಾನ್ಯ ವರ್ಗಕ್ಕೆ ಸೇರಿರುವ ಆರ್ಥಿಕವಾಗಿ ಹಿಂದುಳಿದ ಇತರೆ ಸಮುದಾಯದವರಿಗೆ ಶೇಕಡ 5 ರಷ್ಟು ಮೀಸಲಾತಿಯನ್ನು ಕಲ್ಪಿಸಲಾಗಿದ್ದು, ಪ್ರಸ್ತುತ ಈ ಮೀಸಲಾತಿಯನ್ನು ರದ್ದುಗೊಳಿಸಲಾಗಿದೆ. ಇದರಿಂದ ಆರ್ಥಿಕವಾಗಿ ಹಿಂದುಳಿದ ಆರ್ಯ ವೈಶ್ಯ ಸಮುದಯಕ್ಕೆ ಸೇರಿದ ವಿದ್ಯಾರ್ಥಿಗಳು ಹಾಗೂ ಸಾಮಾನ್ಯ ವರ್ಗಕ್ಕೆ ಸೇರಿರುವ ಎಲ್ಲಾ ಅರ್ಹ ವಿದ್ಯಾರ್ಥಿಗಳು ಸದರಿ ಯೋಜನೆಯಿಂದ ವಂಚಿತರಾಗಿರುತ್ತಾರೆ. ಈ ಸಂಬಂಧ ಆರ್ಯ ವೈಶ್ಯ ಸಮುದಾಯಕ್ಕೆ ಸೇರಿದ ಅನೇಕ ವಿದ್ಯಾರ್ಥಿಗಳು ದೂರುಗಳನ್ನು ಸಲ್ಲಿಸಿರುತ್ತಾರೆ.

ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮವನ್ನು 2013ರ ಕಂಪನಿ ಕಾಯ್ದೆ ಅನ್ವಯ ದಿನಾಂಕ: 13–06–2019ರಂದು ಸ್ಥಾಪನೆ ಮಾಡಲಾಗಿದ್ದು, ನಿಗಮವು ಯಾವುದೇ ರೀತಿಯ ಶುಲ್ಕ ಮರುಪಾವತಿ ಅಥವಾ ಶುಲ್ಕ ವಿನಯಿತಿ ಯೋಜನೆಯನ್ನು ಅನುಷ್ಠಾನಗೊಳಿಸಿರುವುದಿಲ್ಲ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಹಾಗೂ ನಿಗಮವು ಸಹ ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯತಿ ನೀಡಿರುವುದಿಲ್ಲ.

ಪ್ರಸ್ತುತ ಸಾಲಿನಲ್ಲಿ ನಿಗಮಕ್ಕೆ ರೂ5.00 ಕೋಟಿ ಅನುದಾನವನ್ನು ಒದಗಿಸಿದ್ದು, ಸದರಿ ಅನುದನದಲ್ಲಿ ನಿಗಮದ ವತಿಯಿಂದ 2 ಸಾಲ ಯೋಜನೆಗಳನ್ನು ಅನುಷ್ಠಾನಗೊಳಿಸಲು ಮಾತ್ರ ಸಾಧ್ಯವಾಗಿರುತ್ತದೆ ಹಾಗೂ ಅನುದಾನದ ಕೊರತೆಯಿಂದ ಯಾವುದೇ ನವೀನ ಯೋಜನೆಗಳನ್ನು ಸಹ ಹಮ್ಮಿಕೊಳ್ಳಲು ಸಾಧ್ಯವಾಗುವುದಿಲ್ಲ. ಆರ್ಯ ವೈಶ್ಯ ಸಮುದಯಕ್ಕೆ ಸೇರಿದ ಹಲವಾರು ವಿದ್ಯಾರ್ಥಿಗಳು ಶುಲ್ಕ ಮರುಪಾವತಿ ಮಾಡಬೇಕೆಂದು ನಿಗಮಕ್ಕೆ ಮನವಿ ಮಾಡಿದ್ದು, ಅಂದಾಜು 2000 ವಿದ್ಯಾರ್ಥಿಗಳು ಶುಲ್ಕ ಮರುಪಾವತಿಗೆ ಅರ್ಜಿ ಸಲ್ಲಿಸಿದ್ದು, ಇವರುಗಳಿಗೆ ನಿಗಮದ ವತಿಯಿಂದ ಶುಲ್ಕ ಮರುಪಾವತಿ ಮಾಡಲು ಸಾಧ್ಯವಾಗುವುದಿಲ್ಲ.

ಈ ಹಿನ್ನೆಲೆಯಲ್ಲಿ ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಡಿ.ಎಸ್. ಅರುಣ್ ಅವರು ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಚಿವರುನ್ನು ಭೇಟಿ ಮಾಡಿ ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ ಶುಲ್ಕ ಪಾವತಿಯಲ್ಲಿ ಆಗಿರುವ ತೊಂದರೆಯ ಕುರಿತು ವಿವರಣೆ ನೀಡಿ, ಶುಲ್ಕ ಮರುಪಾವತಿಸುವಂತೆ ಕೋರಿ ಮನವಿಯನ್ನು ಸಲ್ಲಿಸಿರುತ್ತಾರೆಂದು, ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರು ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ 150 ಬೆರಳಚ್ಚುಗಾರರ ಹುದ್ದೆಗಳಿಗೆ ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 30 (ಕರ್ನಾಟಕ ವಾರ್ತೆ) :

ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ಖಾಲಿ ಇರುವ 150 ಬೆರಳಚ್ಚುಗಾರರ ಹುದ್ದೆಗಳಿಗೆ ಅರ್ಜಿಗಳನ್ನು ಆಹ್ವಾನಿಸಿದ್ದು, ಅರ್ಜಿಯನ್ನು ನ್ಯಾಯಾಲಯದ ವೆಬ್‍ಸೈಟ್ https://karnatakajudiciary.kar.nic.in/recruitment.php ಆನ್‍ಲೈನ್ ಮೂಲಕ ನವೆಂಬರ್ 27 ರೊಳಗೆ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಯಾವುದೇ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ವಿಜಾನ, ಕಲೆ, ವಾಣಿಜ್ಯ ನಿರ್ವಹಣೆ (Business Management) ಕಂಪ್ಯೂಟರ್ ಅಪ್ಲಿಕೇಷನ್ಸ್ ವಿಷಯಗಳ ಪದವಿಯಲ್ಲಿ ಸಾಮಾನ್ಯ ವರ್ಗ ಮತ್ತು ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಕನಿಷ್ಟ ಶೇಕಡ 55 ರಷ್ಟು ಅಂಕಗಳನ್ನು ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು ಕನಿಷ್ಠ ಶೇಕಡ 50 ರಷ್ಟು ಅಂಕಗಳೊಂದಿಗೆ ತೇರ್ಗಡೆಯಾಗಿರಬೇಕು. ಆಂಗ್ಲ ಮತ್ತು ಕನ್ನಡದಲ್ಲಿ ಹಿರಿಯ ದರ್ಜೆ ಬೆರಳಚ್ಚು ಪರೀಕ್ಷೆಯಲ್ಲಿ ಉತೀರ್ಣರಾಗಿರಬೇಕು ಹಾಗೂ ಕಂಪ್ಯೂಟರ್ ನಿರ್ವಹಣಾ ಜ್ಞಾನ ಹೊಂದಿರಬೇಕು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಥವಾ ಇತರೆ ಹಿಂದುಳಿದ ಜಾತಿಗಳ ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳ ವಯೋಮಿತಿ ಗರಿಷ್ಠ 40 ವರ್ಷ ವಯಸ್ಸು ಮೀರಿರಬಾರದು. ಇತರೆ ಹಿಂದುಳಿದ ವರ್ಗಗಳ ಪ್ರವರ್ಗ 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳ ವಯೋಮಿತಿ 38 ವರ್ಷ ಮೀರಿರಬಾರದು. ಸಾಮಾನ್ಯ ಅಭ್ಯರ್ಥಿಗಳಿಗೆ 35 ವರ್ಷ ವಯಸ್ಸು ಮೀರಿರಬಾರದು.

## ಸಾರ್ವಜನಿಕರು ಪಟಾಕಿ ಹಚ್ಚುವ ಸಂದರ್ಭದಲ್ಲಿ ಅನುಸರಿಸಬೇಕಾದ ಸುರಕ್ಷತಾ ಕ್ರಮ

ಬೆಂಗಳೂರು, ಅಕ್ಟೋಬರ್ 30 (ಕರ್ನಾಟಕ ವಾರ್ತೆ) :

ಸಾರ್ವಜನಿಕರು ಪಟಾಕಿ ಹಚ್ಚುವ ಸಂದರ್ಭದಲ್ಲಿ ಮುಂದೆ ಸೂಚಿಸಿರುವ ಸುರಕ್ಷತಾ ಕ್ರಮಗಳನ್ನು ಅನುಸರಿಸಿ ದೀಪಾವಳಿ ಹಬ್ಬವನ್ನು ಸುರಕ್ಷಿತವಾಗಿ ಆಚರಿಸುವಂತೆ ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವಾ ಇಲಾಖೆಯ ಪೊಲೀಸ್ ಮಹಾನಿರ್ದೇಶಕರು ಹಾಗೂ ಮಹಾನಿರ್ದೇಶಕರಾದ ಕೆ.ಶಿವಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಕ್ಕಳಿಗೆ ದೊಡ್ಡವರ ಸಮ್ಮುಖದಲ್ಲಿ ಪಟಾಕಿ ಹಚ್ಚಲು ತಿಳಿಸತಕ್ಕದ್ದು. ತೆರೆದ ಪ್ರದೇಶದಲ್ಲಿ ಪಟಾಕಿ ಹಚ್ಚುವುದು ಸುರಕ್ಷಿತ. ಯಾವುದೇ ಸಂದರ್ಭದಲ್ಲಿ ಮನೆಯೊಳಗೆ ಪಟಾಕಿ ಹಚ್ಚಬಾರದು. ಆದಷ್ಟು ಶರೀರಕ್ಕೆ ಹೊಂದಿಕೊಳ್ಳುವಂತಹ ಬಟ್ಟೆಗಳನ್ನು ಧರಿಸತಕ್ಕದ್ದು, ದೊಗಲೆ ಬಟ್ಟೆಗಳನ್ನು ಧರಿಸಬಾರದು. ಸುರ ಸುರ ಬತ್ತಿ ಇತ್ಯಾದಿಗಳನ್ನು ಶರೀರದಿಂದ ಆದಷ್ಟು ದೂರ ಹಿಡಿಯಬೇಕು. ಪಟಾಕಿ ಹಚ್ಚುವಾಗ ಅದರ ಮೇಲೆ ಬಾಗಬಾರದು. ಸಾಧ್ಯವಾದಷ್ಟು ಮಟ್ಟಿಗೆ ಪಕ್ಕದಿಂದ ಹಚ್ಚತಕ್ಕದ್ದು. ಯಾವುದೇ ಪಾತ್ರೆಯೊಳಗೆ ಅಥವಾ ಇಕ್ಕಟ್ಟಾದ ಸ್ಥಳಗಳಲ್ಲಿ ಪಟಾಕಿ ಹಚ್ಚಬಾರದು, ಜೇಬಿನಲ್ಲಿಡಬಾರದು.

ಯಾವುದೇ ಸಂದರ್ಭದಲ್ಲಿ ಪಟಾಕಿಗಳನ್ನು ಬೆಂಕಿಯ ಅಥವಾ ಉಷ್ಣತೆ ಹೆಚ್ಚಿರುವ ಸ್ಥಳಗಳಲ್ಲಿಡಬಾರದು ಹಾಗೂ ಪೊಟ್ಟಣಗಳನ್ನು ತೆರೆಯಬಾರದು. ಹಚ್ಚಿರುವ ಪಟಾಕಿ ಸಿಡಿಯದಿದ್ದರೆ ಅದನ್ನು ಪುನರ್ ಪರೀಕ್ಷಿಸಲು ಪ್ರಯತ್ನಿಸಬಾರದು. ಹೂ ಕುಂಡಗಳನ್ನು ಕೈಯಲ್ಲಿ ಹಿಡಿದುಕೊಂಡು ಹಚ್ಚಬಾರದು. ರಾಕೆಟ್ ಬಳಸುವುದನ್ನು ಪೂರ್ಣವಾಗಿ ತಪ್ಪಿಸುವುದು ಉತ್ತಮ. ಬೇರೆಯವರಿಗೆ ತೋರಿಸಿಕೊಳ್ಳಲು ಪಟಾಕಿ ಹಚ್ಚುವ ಅಪಾಯಕ್ಕೆ ಅವಕಾಶ ಕೊಡಬಾರದು. ಪಟಾಕಿ ಹಚ್ಚುವಾಗ ಯಾವಾಗಲೂ ಪಕ್ಕದಲ್ಲಿ ನೀರನ್ನು ಇಟ್ಟುಕೊಳ್ಳಬೇಕು. ಆಕಸ್ಮಿಕವಾಗಿ ಸುಟ್ಟ ಗಾಯಗಳಾದರೆ ಕೂಡಲೇ ತಣ್ಣೀರನ್ನು ಸುರಿಯತಕ್ಕದ್ದು.

ಸಾಧ್ಯವಾದಷ್ಟು ಮಟ್ಟಿಗೆ ಸ್ನೇಹಿತರ ಜೊತೆ ಸೇರಿ ಸಾರ್ವಜನಿಕ ತೆರೆದ ಪ್ರದೇಶಗಳಲ್ಲಿ ಪಟಾಕಿ ಹಚ್ಚುವುದು ಸೂಕ್ತ ಇದರಿಂದ ಎಲ್ಲರೂ ಸಂತೋಷ ಪಡಬಹುದು ಹಾಗೂ ಸುರಕ್ಷಿತ.

ಪಟಾಕಿ ಹಚ್ಚುವಾಗ ಮಕ್ಕಳು, ವಯಸ್ಸಾದವರು, ಖಾಯಿಲೆ ಇರುವವರು ಹಾಗೂ ಪ್ರಾಣಿಗಳನ್ನು ಗಮನಿಸಿ ಅವರಿಗೆ ಆಗುವ ತೊಂದರೆಗಳನ್ನು ತಪ್ಪಿಸಲು ಪ್ರಯತ್ನಿಸಿ. ಸಾಧ್ಯವಾದಷ್ಟು ಮಟ್ಟಿಗೆ ಹೆಚ್ಚು ಶಬ್ದ ಬರುವ ಪಟಾಕಿಗಳನ್ನು ಆಸ್ಪತ್ರೆ ಮತ್ತು ಇತರೆ ಸೂಕ್ಷ್ಮ ಪ್ರದೇಶಗಳಲ್ಲಿ ಬಳಸುವುದನ್ನು ತಪ್ಪಿಸಿ ಜೊತೆಗೆ ದೇಶದಾದ್ಯಂತ ಹರಡಿರುವ ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಸರ್ಕಾರವು ಹೊರಡಿಸಿರುವ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಅನುಸರಿಸತಕ್ಕದ್ದು.

## ಗೋವುಗಳ ಸಂರಕ್ಷಣೆ ಬಗ್ಗೆ ಜನಜಾಗೃತಿ

ಬೆಂಗಳೂರು, ಅಕ್ಟೋಬರ್ 30 (ಕರ್ನಾಟಕ ವಾರ್ತೆ) :

ನಮ್ಮ ಧಾರ್ಮಿಕ ಹಾಗೂ ಸಾಂಸ್ಕೃತಿಕ ಅವಿಭಾಜ್ಯ ಅಂಗಗಳಾದ ಗೋವುಗಳ ಮಹತ್ವ ಹಾಗೂ ಗೋವುಗಳ ಸಂರಕ್ಷಣೆ ಕುರಿತು ಜನಜಾಗೃತಿ ಮೂಡಿಸುವ ಸಲುವಾಗಿ ನವೆಂಬರ್ 5ರ ಬಲಿಪಾಡ್ಯಮಿ ದಿನದಂದು ರಾಜ್ಯದ ಎಲ್ಲಾ ಹಿಂದೂ ದೇವಾಲಯಗಳಲ್ಲಿ ಗೋಮಾತೆಯನ್ನು ಪೂಜಿಸಿ ಆರಾಧಿಸಲು ಮುಜರಾಯಿ ಇಲಾಖೆ ನಿರ್ಧಾರ ಕೈಗೊಂಡಿದೆ ಎಂದು ಮುಜರಾಯಿ , ಹಜ್ ಹಾಗೂ ವಕ್ಫ್ ಸಚಿವೆ ಶಶಿಕಲಾ ಅ. ಜೊಲ್ಲೆ ಅವರು ತಿಳಿಸಿದ್ದಾರೆ.

ಹಿಂದೂ ಧರ್ಮದ ಪುರಾಣ, ಉಪನಿಷತ್ತುಗಳಲ್ಲಿ ಗೋವುಗಳಿಗೆ ವಿಶೇಷ ಸ್ಥಾನವಿದೆ. ಹಿಂದು ಧರ್ಮಗ್ರಂಥಗಳಲ್ಲಿ ಗೋವಿಗೆ ಮಾತೆಯ ಸ್ಥಾನ ನೀಡಲಾಗಿದೆ. ಗೋಮಾತೆಯನ್ನು ಪೂಜಿಸಿದರೆ ಅನೇಕ ಸಮಸ್ಯೆಗಳು ಪರಿಹಾರವಾಗುವುದರ ಜೊತೆ ವಾಸ್ತುದೋಷಕ್ಕೂ ಪರಿಹಾರ ದೊರೆಯುವುದೆಂಬ ನಂಬಿಕೆ ನಮ್ಮ ಸಮಾಜದಲ್ಲಿದೆ. ಶ್ರೀಮದ್ ಭಗವದ್ಗೀತೆ, ಭಾಗವತ ಮಹಾ ಪುರಾಣ ಸೇರಿದಂತೆ ಹಲವಾರು ಮಹಾಪುರಾಣಗಳಲ್ಲಿ ಗೋವುಗಳ ಮಹತ್ವವನ್ನು ಉಲ್ಲೇಖಿಸಲಾಗಿದೆ.

ಗೋವುಗಳಲ್ಲಿ ದೇವಾನುದೇವತೆಗಳು ನೆಲೆಸಿದ್ದಾರೆಂಬುದು ಹಿಂದುಗಳ ನಂಬಿಕೆ. ಅನಾದಿಕಾಲದಿಂದಲೂ ಗೋಮಾತೆಯನ್ನು ಪೂಜೆ ಮಾಡುತ್ತಿದ್ದಾರೆ. ನಮ್ಮ ದೇಶೀಯ ಗೋ ತಳಿಗಳನ್ನು ಉಳಿಸಿ ಬೆಳೆಸಲು ಪ್ರತಿ ರೈತ ಕುಟುಂಬಗಳವರು ಒಂದಾದರೂ ದೇಶೀಯ ತಳಿಯ ಗೋವುಗಳನ್ನು ಸಾಕಲು ಮುಂದಾಗಬೇಕಿದೆ. ಸನಾತನ ಧರ್ಮದ ಗೋಮಾತೆಯ ಪೂಜೆಯನ್ನು, ಪೂಜಿಸುವ ಸಂಪ್ರದಾಯವನ್ನು ನಮ್ಮ ಮುಂದಿನ ಪೀಳಿಗೆಗೂ ತಿಳಿಸುವ ಜವಾಬ್ದಾರಿ ನಮ್ಮೆಲ್ಲರದಾಗಿದೆ. ಈ ಸಂಪ್ರದಾಯವನ್ನು ಮುಂದುವರಿಸಿಕೊಂಡು ಬರಲು ವರ್ಷದಲ್ಲಿ ಒಂದು ದಿನ ಇಲಾಖೆಯ ದೇವಾಲಯಗಳಲ್ಲಿ ಗೋವುಗಳನ್ನು ಪೂಜಿಸುವುದನ್ನು ಕಡ್ಡಾಯ ಮಾಡುವುದರೊಂದಿಗೆ ಗೋಮಾತೆಯ ಪೂಜೆಯನ್ನು ಪರಿಚಯಿಸಲು ಬಲಿಪಾಡ್ಯಮಿ ದಿನ ಸೂಕ್ತವಾಗಿರುವುದರಿಂದ ಆ ದಿನದಂದು ಗೋ ಪೂಜೆ ಮಾಡಲು ಸೂಚಿಸಲಾಗಿದೆ.

ನವೆಂಬರ್ 5ರ ಬಲಿಪಾಡ್ಯಮಿ ದಿನ ಸಂಜೆ 5.30ರಿಂದ 6.30ರ ಸಮಯಲ್ಲಿ ರಾಜ್ಯದ ಎಲ್ಲ ಅಧಿಸ್ರಚಿತ ದೇವಾಲಯಗಳಲ್ಲಿ ಗೋವುಗಳನ್ನು ಪೂಜಿಸುವುದರೊಂದಿಗೆ ಗೋವುಗಳ ಮಹತ್ವ ಮತ್ತು ದೇಶಿಯ ಗೋ ತಳಿಗಳನ್ನು ಸಂರಕ್ಷಣೆ ಮಾಡಲು ಪ್ರೋತ್ಸಾಯಿಸಲು ಜಾಗೃತಿ ಮೂಡಿಸಲಾಗುತ್ತಿದೆ.

ನವೆಂಬರ್ 5ರ ಬಲಿಪಾಡ್ಯಮಿ ದಿನದಂದು ಆಯಾ ವ್ಯಾಪ್ತಿ ದೇವಲಾಯಗಳಲ್ಲಿ ನಡೆಯುವ ಪ್ರಜಾ ಕೈಂಕರ್ಯದಲ್ಲಿ ಆಯಾ ಭಾಗದ ಜನಪ್ರತಿನಿಧಿಗಳು ಭಾಗವಹಿಸುವುದರ ಮೂಲಕ ಹೆಚ್ಚಿನ ಜಾಗೃತಿ ಮೂಡಿಸಲು ಮುಜರಾಯಿ, ಹಜ್ ಹಾಗೂ ವಕ್ಫ್ ಸಚಿವೆ ಶಶಿಕಲಾ ಅ. ಜೊಲ್ಲೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೃಹತ್ ಕೈಗಾರಿಕಾ ಸಚಿವರ ಪ್ರವಾಸ

ಬೆಂಗಳೂರು, ಅಕ್ಟೋಬರ್ 30 (ಕರ್ನಾಟಕ ವಾರ್ತೆ) :

ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಮುರಗೇಶ್ ಆರ್ ನಿರಾಣಿ ಅವರು ಅಕ್ಟೋಬರ್ 31 ಮತ್ತು ನವೆಂಬರ್ 01 ಮತ್ತು 02 ರಂದು ಕಲಬುರಗಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಕೇಂದ್ರ ಸ್ಥಾನಕ್ಕೆ ಹಿಂದಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

**ಛಾಯಾಚಿತ್ರ ಶೀರ್ಷಿಕೆ :**

ಇಂದು ದಿನಾಂಕ: 30-10-2021ರಂದು ಗೌರವಾನ್ವಿತ ರಾಜ್ಯಪಾಲರಾದ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರು, ಬೆಂಗಳೂರಿನ ಕಂಠೀರವ ಸ್ಟೇಡಿಯಂಗೆ ತೆರಳಿ ನಿನ್ನೆ ದಿನಾಂಕ: 29-10-2021ರಂದು ತೀವ್ರ ಹೃದಯಾಘಾತದಿಂದ ನಿಧನರಾದ ಖ್ಯಾತ ಚಿತ್ರನಟ ಪವರ್ ಸ್ಟಾರ್ ಪುನೀತ್ ರಾಜ್ ಕುಮಾರ್ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದು, ನಮನ ಸಲ್ಲಿಸಿದರು.

ಈ ಸಮಯದಲ್ಲಿ ರಾಜ್ಯದ ಮುಖ್ಯಮಂತ್ರಿಗಳಾದ ಬಸವರಾಜ ಎಸ್ ಬೊಮ್ಮಾಯಿ, ಗೃಹಸಚಿವ ಅರಗ ಜ್ಞಾನೇಂದ್ರ ಉಪಸ್ಥಿತರಿದ್ದರು.

## 01.11.2021ರ ಕರ್ನಾಟಕ ರಾಜ್ಯೋತ್ಸವದಂದು ರಾಜ್ಯದ ಕಾರಾಗೃಹಗಳಲ್ಲಿ ಬೃಹತ್ ಸಾಕ್ಷರತಾ ಕಾರ್ಯಕ್ರಮಕ್ಕೆ ಚಾಲನೆ

**ಬೆಂಗಳೂರು, ಅಕ್ಟೋಬರ್ 30 (ಕರ್ನಾಟಕ ವಾರ್ತೆ) :**

ಕರ್ನಾಟಕ ರಾಜ್ಯದಲ್ಲಿ ಕಾರಾಗೃಹ ಮತ್ತು ಸುಧಾರಣಾ ಸೇವೆ ಇಲಾಖೆ ವತಿಯಿಂದ "ನವಚೇತನ" ಕಾರ್ಯಕ್ರಮದಡಿಯಲ್ಲಿ ರಾಜ್ಯದ 50 ಕಾರಾಗೃಹಗಳಲ್ಲಿ 15,000ಕ್ಕೂ ಹೆಚ್ಚು ಬಂದಿಗಳಿಗೆ ಪ್ರಮುಖ ಸುಧಾರಣಾ ಕಾರ್ಯಕ್ರಮಗಳನ್ನು ಪ್ರಾರಂಭಿಸಲಾಗಿರುತ್ತದೆ. ಈ ಕಾರ್ಯಕ್ರಮವು ಬಂದಿಗಳ ದೈಹಿಕ, ಮಾನಸಿಕ ಯೋಗಕ್ಷೇಮ, ಶಿಕ್ಷಣ ಮತ್ತು ಕೌಶಲ್ಯ ಮಟ್ಟವನ್ನು ಹಾಗೂ ಬಂದಿಗಳ ಸ್ವಾಭಿಮಾನವನ್ನು ಸಮಗ್ರವಾಗಿ ಸುಧಾರಿಸುವ ಗುರಿಯನ್ನು ಹೊಂದಿರುತ್ತದೆ. ಇದರಿಂದ ಅವರುಗಳು ಕಾರಾಗೃಹದ ಒಳಗೆ ಮತ್ತು ಬಿಡುಗಡೆಯಾದ ನಂತರ ಸಮಾಜದಲ್ಲಿ ಉತ್ತಮ ನಾಗರೀಕರಾಗಿ ಜೀವನವನ್ನು ನಡೆಸಲು ಸಮರ್ಥರಾಗುತ್ತಾರೆ. ಈ ಕಾರ್ಯಕ್ರಮವು ರಾಜ್ಯದ ಕಾರಾಗೃಹಗಳ ಕಾರ್ಯನಿರ್ವಹಣೆಯಲ್ಲಿ ಪ್ರಮುಖ ಸುಧಾರಣೆಗಳನ್ನು ತರುವ ಗುರಿಯನ್ನು ಹೊಂದಿರುತ್ತದೆ.

ರಾಜ್ಯದ ಎಲ್ಲಾ 50 ಕಾರಾಗೃಹಗಳಲ್ಲಿ ಸುಮಾರು 15,000 ಬಂದಿಗಳ ಶಿಕ್ಷಣ ಮತ್ತು ಕೌಶಲ್ಯದ ಅವಶ್ಯಕತೆಗಳನ್ನು ಅರ್ಥಮಾಡಿಕೊಳ್ಳಲು ವಿವರವಾದ ಅಧ್ಯಯನವನ್ನು ನಡೆಸಲಾಗಿರುತ್ತದೆ. ಇದರಲ್ಲಿ ಸುಮಾರು 7,000 ಬಂದಿಗಳು (47%) ಅನಕ್ಷರಸ್ಥರು ಹಾಗೂ ಅರೆ ಅಕ್ಷರಸ್ಥರಾಗಿರುತ್ತಾರೆ. ಸುಮಾರು 3,000 ಬಂದಿಗಳು (21%) ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ವ್ಯಾಸಂಗ ಮಾಡಿರುತ್ತಾರೆ. ಸುಮಾರು 2,100 ಬಂದಿಗಳು (14%) ಪಿ.ಯು.ಸಿ ಅಥವಾ ಡಿಪ್ಲೊಮೋ ವ್ಯಾಸಂಗ ಮಾಡಿರುತ್ತಾರೆ. ಸುಮಾರು 1,000 ಬಂದಿಗಳು (7%) ಪದವೀಧರ ಅಥವಾ ಸ್ನಾತಕೋತ್ತರ ಪದವೀಧರರಾಗಿರುತ್ತಾರೆ. ಇದಲ್ಲದೇ ಸುಮಾರು 100 ಬಂದಿಗಳು ಇಂಜಿನಿಯರಿಂಗ್, ವೈದ್ಯಕೀಯ, ಕಾನೂನು ಪದವಿ ಹಾಗೂ ಇತರೆ ಉನ್ನತ ಶಿಕ್ಷಣವನ್ನು ಪಡೆದಿರುತ್ತಾರೆ.

ಪ್ರಸ್ತುತ ದಿನಾಂಕ: 01.11.2021ರ ಕರ್ನಾಟಕ ರಾಜ್ಯೋತ್ಸವದಂದು "ಲೋಕಾ ಶಿಕ್ಷಣ ನಿರ್ದೇಶನಾಲಯ" ದ ಸಹಯೋಗದೊಂದಿಗೆ ರಾಜ್ಯದ ಎಲ್ಲಾ 50 ಕಾರಾಗೃಹಗಳಲ್ಲಿ ಸುಮಾರು 7,000 ಅನಕ್ಷರಸ್ಥ ಮತ್ತು ಅರೆಅಕ್ಷರಸ್ತ ಬಂದಿಗಳಿಗೆ ಬೃಹತ್ "ಸಾಕ್ಷರತಾ ಕಾರ್ಯಕ್ರಮ" ವನ್ನು

ಪ್ರಾರಂಭಿಸಲಾಗುತ್ತಿದೆ. ಇದರ ವೈಶಿಷ್ಟ್ಯತೆ ಏನೆಂದರೆ ಸಾಕ್ಷರತೆಯ ಕಾರ್ಯಕ್ರಮಗಳನ್ನು ಆಯೋಜಿಸಲು ಕಾರಾಗೃಹಗಳಲ್ಲಿರುವ ವಿದ್ಯಾವಂತ ಬಂದಿಗಳನ್ನು ಸಂಪನ್ಮೂಲ ವ್ಯಕ್ತಿಗಳನ್ನಾಗಿ ಬಳಸಿಕೊಳ್ಳಲಾಗುತ್ತದೆ.

ಈ ಬೃಹತ್ "ಸಾಕ್ಷರತಾ ಕಾರ್ಯಕ್ರಮ" ವು ಕರ್ನಾಟಕ ರಾಜ್ಯದಲ್ಲಿ ಮಾತ್ರವಲ್ಲದೇ ದೇಶದ ಇತರೆ ಕಾರಾಗೃಹಗಳಲ್ಲಿ ಇದುವರೆಗೂ ಪ್ರಯತ್ನಿಸದ ಬೃಹತ್ ಸಾಕ್ಷರತಾ ಕಾರ್ಯಕ್ರಮಗಳಲ್ಲಿ ಒಂದಾಗಿರುತ್ತದೆ. ಈ ಕಾರ್ಯಕ್ರಮವು ಬಂದಿಗಳ ಆತ್ಮವಿಶ್ವಾಸ ಮತ್ತು ಸ್ವಾಭಿಮಾನವನ್ನು ಹೆಚ್ಚಿಸುವ ನಿರೀಕ್ಷೆಯನ್ನು ಹೊಂದಿದ್ದು, ಅವರನ್ನು ಸಮಾಜದಲ್ಲಿ ಉತ್ತಮ ನಾಗರೀಕರನ್ನಾಗಿ ಮಾಡಲು ಸಹಕಾರಿಯಾಗಲಿದೆ.

ಈ ಉದೇಶವನ್ನು ಸಾಧಿಸಲು ರಾಜ್ಯದ "ಲೋಕಾ ಶಿಕ್ಷಣ ನಿರ್ದೇಶನಾಲಯ" ದ ವತಿಯಿಂದ ವಿವಿಧ ಕಾರಾಗೃಹಗಳಲ್ಲಿರುವ ವಿದ್ಯಾವಂತ ಬಂದಿಗಳಿಗೆ ಸಾಕ್ಷರತಾ ತರಗತಿಗಳನ್ನು ನಡೆಸಲು "ಸಂಪನ್ಮೂಲ ವ್ಯಕ್ತಿ" ಗಳನ್ನಾಗಿ ಕೆಲಸ ಮಾಡಲು ತರಬೇತಿಯನ್ನು ನೀಡುತ್ತಿದೆ. ಕಾರಾಗೃಹದಿಂದ ಬಂದಿಗಳು ಬಿಡುಗಡೆಯಾದ ನಂತರವೂ ತಮ್ಮ ಸ್ಥಳೀಯ ಅಥವಾ ಕೆಲಸದ ಸ್ಥಳಗಳಲ್ಲಿ ಸರ್ಕಾರದ "ಲೋಕಾ ಶಿಕ್ಷಣ ನಿರ್ದೇಶನಾಲಯ" ದ ಕೇಂದ್ರಗಳ ಸಹಾಯದಿಂದ ಸಾಕ್ಷರತಾ ಕಾರ್ಯಕ್ರಮಗಳನ್ನು ಮುಂದುವರೆಸಬಹುದಾಗಿರುತ್ತದೆ. ಇದಲ್ಲದೇ ಬಂದಿಗಳ ಹೆಚ್ಚಿನ ಶೈಕ್ಷಣಿಕ ಅವಶ್ಯಕತೆಗಳಿಗಾಗಿ "ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್" ಅನ್ನು ಸಹ ತೊಡಗಿಸಿಕೊಳ್ಳಲಾಗುತ್ತಿದೆ.

ಈಗಾಗಲೇ ಕೇಂದ್ರ ಕಾರಾಗೃಹ, ಬೆಂಗಳೂರಿನಲ್ಲಿ ದಿನಾಂಕ: 26.08.2021ರಂದು ಕರ್ನಾಟಕ ರಾಜ್ಯದ ಸನ್ಮಾನ್ಯ ಗೃಹ ಸಚಿವರಾದ ಶ್ರೀ ಆರಗ ಜ್ಞಾನೇಂದ್ರ ರವರು ರಾಜ್ಯದ 50 ಕಾರಾಗೃಹಗಳಲ್ಲಿನ ಸುಮಾರು 15,000 ಬಂದಿಗಳಿಗೆ ಹಾಗೂ 3,500 ಕಾರಾಗೃಹದ ಸಿಬ್ಬಂದಿಗಳಿಗೆ "ನವಚೇತನ" ಕಾರ್ಯಕ್ರಮದ ಅಡಿಯಲ್ಲಿ "ಮಾನಸಿಕ ಮತ್ತು ದೈಹಿಕ ಯೋಗಕ್ಷೇಮ" ಕಾರ್ಯಕ್ರಮವನ್ನು ಉದ್ಘಾಟಿಸಿರುತ್ತಾರೆ.

ಈ ಕಾರ್ಯಕ್ರಮದಡಿಯಲ್ಲಿ ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿರುವ 400 ಕಾರಾಗೃಹದ ಸಿಬ್ಬಂದಿಗಳಿಗೆ ಹಾಗೂ 540 ಬಂದಿಗಳಿಗೆ ಆಗಸ್ಟ್ 2021ರ ಮಾಹೆಯಿಂದ ಬೆಂಗಳೂರಿನ "ಆರ್ಟ್ ಆಫ್ ಲಿವಿಂಗ್ ಫೌಂಡೇಷನ್" ವತಿಯಿಂದ ಈಗಾಗಲೇ "ಅಡ್ವಾನ್ಸ್ ಯೋಗ" ತರಬೇತಿಯನ್ನು ನೀಡಲಾಗಿರುತ್ತದೆ. ಇದರೊಂದಿಗೆ ಇತರೆ ಸರ್ಕಾರೇತರ ಸಂಸ್ಥೆಗಳ ಸಹಾಯವನ್ನು ಪಡೆದು "ಅಡ್ವಾನ್ಸ್ ಯೋಗ" ಕಾರ್ಯಕ್ರಮಗಳನ್ನು ನಿರಂತರವಾಗಿ ರಾಜ್ಯದ ಎಲ್ಲಾ 3,500 ಕಾರಾಗೃಹದ ಸಿಬ್ಬಂದಿಗಳಿಗೆ ಹಾಗೂ ಸುಮಾರು 15,000 ಬಂದಿಗಳಿಗೆ ನಡೆಸಲು ಯೋಜಿಸಲಾಗಿರುತ್ತದೆ.